**<u>ದಿನಾಂಕ 16-09-2025 ರಂದು ಸಾಕ್ಷಿಯನ್ನು ಕರೆಯಿಸಿ ಮುಖ್ಯ ವಿಚಾರಣೆಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಶ್ರೀ.ಎನ್. ಜಿ. ವಾದಿ ಪರ ವಕೀಲರಿಂದಃಃ</u>**

ನಾನು ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಯಿಸಿ ತಿಳಿದುಕೊಂಡಿರುತ್ತೇನೆ ಹಾಗೂ ಈ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣ ಮಾಡಿ ಸಹಿ ಮಾಡಿರುತ್ತೇನೆ.

ನಾನು ಈಗಾಗಲೇ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದು, ಅವುಗಳನ್ನು ನಾನು ನೋಡಿ ಗುರುತಿಸಿದ್ದು , ನಂತರ ಈ ಕೆಳಕಂಡಂತೆ ದಾಖಲಾತಿಗಳನ್ನು ಗುರುತಿಸಲಾಯಿತು.

1. ಸಾಕ್ಷಿಯು 2008-09 ರ ಮ್ಯುಟೇಶನ್ ರಿಜಿಸ್ಟರ್ ನ್ನು ನೋಡಿ ಗುರುತಿಸಿದ್ದು , ಅದನ್ನು ನಿಪಿ 1 ಎಂದು ಗುರುತಿಸಲಾಯಿತು.

2. ಸಾಕ್ಷಿಯು ಮೂರು ಕಂದಾಯ ರಸೀದಿಗಳನ್ನು ನೋಡಿ ಗುರುತಿಸಿದ್ , ಅವುಗಳನ್ನು ನಿಪಿ-2 ಮತ್ತು ನಿಪಿ-4 ಎಂದು ಗುರುತಿಸಲಾಯಿತು.

3. ಸಾಕ್ಷಿಯು ಪೋಲೀಸರಿಗೆ ನೀಡಿದ ದೂರನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

4. ಸಾಕ್ಷಿಯು ಪೋಲೀಸರು ನೀಡಿದ ಎನ್ ಸಿ ಆರ್ ಪ್ರತಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

5. ಸಾಕ್ಷಿಯು 9 ಪೋಟೋಗಳನ್ನು ಮತ್ತು 1 ಸಿಡಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-7 ರಿಂದ ನಿಪಿ- 16 ಎಂದು ಗುರುತಿಸಲಾಯಿತು.

6. ಸಾಕ್ಷಿಯು ಹರೀಶ್ ಸ್ಟುಡಿಯೋ ಬಿಲ್ ನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-17 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯನ್ನು ಪುರಸ್ಕರಿಸಬೇಕೆಂದು ಕೋರಿರುತ್ತಾರೆ.

**ಪಾಟೀ ಸವಾಲುಃ ಪ್ರತಿವಾದಿ1, 3 ರಿಂದ 9 ಪರ ವಕೀಲರು ಯಾವುದೇ ಪ್ರತಿವಾದ ಪತ್ರವನ್ನು ಸಲ್ಲಿಸದೇ ಇರುವುದರಿಂದ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು).**

**ಓ ಹೇ ಕೇ ಸ ಇದೆ.**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಿಂತಾಮಣಿ.